159 ಉ   ದಿ:17.08.26 ಕ್ರ.ಸಂ.01

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ.ಟಿ. ಶ್ರೀನಿವಾಸ ಇವರು ಶೂನ್ಯ ವೇಳೆ ಪ್ರಸ್ತಾಪಿತ ವಿಷಯಕ್ಕೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಉತ್ತರ**

ವಿಷಯ: ದಿನಾಂಕ:17.08.2026 ರಂದು ವಿಜಯ ಕರ್ನಾಟಕ ದಿನಪತ್ರಿಕೆಯಲ್ಲಿ '**ರಾಜ್ಯದಲ್ಲಿ ಶಿಕ್ಷಕರ ಸಮಸ್ಯೆಗಳಿಗೆ ಪರಿಹಾರ ಒದಗಿಸಿ**' ಎಂಬ ವಿಷಯವು ಪ್ರಕಟವಾಗಿದ್ದು, ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರು ಇತ್ತೀಚಿನ ದಿನಗಳಲ್ಲಿ ಹಲವು ಗಂಭೀರ ಸಮಸ್ಯೆಗಳು ಎದುರಾಗುತ್ತಿದ್ದು, ವಿಶೇಷವಾಗಿ ಶಿಕ್ಷಕರನ್ನು ಬೋಧನಾ ಕಾರ್ಯದಿಂದ ಹೊರತುಪಡಿಸಿ, ವಿವಿಧ ಇಲಾಖೆಗಳ ಸಮೀಕ್ಷೆ, ಜನಗಣತಿ, ಚುನಾವಣೆ, ತರಬೇತಿ, ಆನ್‌ಲೈನ್ ದತ್ತಾಂಶ ನಮೂದು ಹಾಗೂ ಇತರ ಆಡಳಿತಾತ್ಮಕ ಕಾರ್ಯಗಳಿಗೆ ಪದೇ ಪದೇ ನಿಯೋಜಿಸಲಾಗುತ್ತಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳ ಮೇಲೆ ಪರಿಣಾಮ ಬೀರುತ್ತಿದೆ. ಮತ್ತೊಂದೆಡೆ, ಶಿಕ್ಷಕರ ವರ್ಗಾವಣೆ, ಬಡ್ತಿ, ಖಾಲಿ ಹುದ್ದೆಗಳ ಭರ್ತಿ, ಅತಿಥಿ ಶಿಕ್ಷಕರ ನೇಮಕಾತಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಶಿಕ್ಷಕರ ಕೊರತೆಯ ಸಮಸ್ಯೆಗಳು ಇನ್ನೂ ಸಂಪೂರ್ಣವಾಗಿ ಬಗೆಹರಿದಿಲ್ಲ.

ಇತ್ತೀಚೆಗೆ ಶಿಕ್ಷಕರ ಕಾರ್ಯಭಾರ ಮತ್ತು ಇಲಾಖೆಯ ಆಡಳಿತಾತ್ಮಕ ಒತ್ತಡಕ್ಕೆ ಸಂಬಂಧಿಸಿದಂತೆ ರಾಜ್ಯಾದ್ಯಂತ ಚರ್ಚೆ ನಡೆಯುತ್ತಿರುವ ಹಿನ್ನೆಲೆಯಲ್ಲಿ, ಸರ್ಕಾರವು ಶಿಕ್ಷಕರನ್ನು ಬೋಧನಾ ಕಾರ್ಯಕ್ಕೆ ಹೆಚ್ಚಿನ ಆದ್ಯತೆಯೊಂದಿಗೆ ಬಳಸಿಕೊಳ್ಳಲು ಯಾವ ಕ್ರಮ ಕೈಗೊಂಡಿದ ಎಂಬುದು ಸ್ಪಷ್ಟವಾಗಬೇಕಾಗಿದೆ.

ಆದ್ದರಿಂದ, ಸರ್ಕಾರವು ರಾಜ್ಯದ ಪ್ರಸ್ತುತ ಶಿಕ್ಷಕರ ಕೊರತೆ, ಖಾಲಿ ಹುದ್ದೆಗಳು, ಶಿಕ್ಷಕರಿಗೆ ನೀಡಲಾಗುತ್ತಿರುವ ಬೋಧನೇತರ ಕರ್ತವ್ಯಗಳು ಹಾಗೂ ವಿದ್ಯಾರ್ಥಿಗಳ ಕಲಿಕೆಯ ಗುಣಮಟ್ಟದ ಮೇಲೆ ಉಂಟಾಗುತ್ತಿರುವ ಪರಿಣಾಮದ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಶಿಕ್ಷಕರ ಮೇಲಿನ ಬೋಧನೇತರ ಕಾರ್ಯಭಾರವನ್ನು ಕಡಿಮೆ ಮಾಡಿ, ಖಾಲಿ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡುವ ಮೂಲಕ ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟವನ್ನು ಸುಧಾರಿಸಲು ಸರ್ಕಾರವು ತುರ್ತಾಗಿ ಕ್ರಮ ಕೈಗೊಳ್ಳಬೇಕು ಎಂಬ ವಿಷಯವನ್ನು "ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ" ಸಚಿವರಲ್ಲಿ ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

*********

ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಪೀಲ್ ಸಂಖ್ಯೆ:5659/2007 ರಲ್ಲಿ ಚುನಾವಣಾ ಕಾರ್ಯಕ್ಕೆ ನಿಯೋಜಿಸಲು ಭಾರತ ಚುನಾವಣಾ ಆಯೋಗದ ಮತದಾರರ ಪಟ್ಟಿಗಳ ಕೈಪಿಡಿ ಅಕ್ಟೋಬರ್ 2016 ರ ಅಧ್ಯಾಯ 5 ರ ಪ್ಯಾರಾ 5.2 ಮತಗಟ್ಟೆ ಮಟ್ಟದ ಅಧಿಕಾರಿಗಳ ನಿಯೋಜನೆಗೆ 13 ವಿವಿಧ ಹುದ್ದೆಗಳನ್ನು ನೀಡಲಾಗಿರುತ್ತದೆ. ಅದರಲ್ಲಿ ಶಿಕ್ಷಕರ ಹುದ್ದೆಯೂ ಒಂದಾಗಿರುತ್ತದೆ ಹಾಗೂ ತೀರಾ ಅನಿವಾರ್ಯ ಸಂದರ್ಭಗಳಲ್ಲಿ ಕೆಲವೊಂದು ಷರತ್ತಿನ ಮೇರೆಗೆ ಕಾರ್ಯಗಳನ್ನು ನಿರ್ವಹಿಸಲು ಸೂಚಿಸಲಾಗುತ್ತಿದೆ.

2025-26ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರ ವೃಂದದಿಂದ 1446 ಹಿರಿಯ ಮುಖ್ಯ ಶಿಕ್ಷಕರ (SHM) ಹುದ್ದೆಗಳಿಗೆ ನಿಯಮಾನುಸಾರ ಸ್ಥಾನಪನ್ನ ಬಡ್ತಿ ನೀಡಲಾಗಿದೆ ಹಾಗೂ 2026-27 ನೇ ಸಾಲಿನಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಸಹ ಶಿಕ್ಷಕರ ವೃಂದದಿಂದ 5122 ಮುಖ್ಯ ಶಿಕ್ಷಕರ ಹುದ್ದೆಗಳಿಗೆ ನಿಯಮಾನುಸಾರ ಸ್ಥಾನಪನ್ನ ಬಡ್ತಿ ನೀಡಲಾಗಿದೆ.

...2

ಶಿಕ್ಷಕರನ್ನು ಇತರ ಕಾರ್ಯಗಳಿಗೆ ನಿಯೋಜನೆಯಿಂದ ವರ್ಗಾವಣೆ ಕಾಯ್ದೆ ಮತ್ತು ನಿಯಮಗಳನ್ವಯ ಶಿಕ್ಷಕರ ವರ್ಗಾವಣೆ ಪ್ರಕ್ರಿಯೆಯನ್ನು ಸಕಾಲದಲ್ಲಿ ನಿರ್ವಹಿಸಲು ಕಷ್ಟಸಾಧ್ಯವಾಗಿರುತ್ತದೆ.

ಪ್ರೌಢ ಶಾಲಾ ಶಿಕ್ಷಕರನ್ನು ಚುನಾವಣಾ ಆಯೋಗದ ಆದೇಶದ ಮೇರೆಗೆ, SIR ಕರ್ತವ್ಯಕ್ಕೆ ನಿಯೋಜಿಸಲಾಗಿದೆ. ಈ ಶಾಲೆಗಳಲ್ಲಿ ಕಲಿಕಾ-ಬೋಧನಾ ಚಟುವಟಿಕೆಗಳಿಗೆ ತೊಂದರೆಯಾಗದಂತೆ ತಾತ್ಕಾಲಿಕ ವ್ಯವಸ್ಥೆಯನ್ನು ಮಾಡಲಾಗಿದೆ. ಶಾಲಾ ಶೈಕ್ಷಣಿಕ ಚಟುವಟಿಕೆಗಳು ಎಂದಿನಂತೆ ನಿಗದಿತ ಅವಧಿಯಲ್ಲಿ ನಡೆಯುತ್ತಿವೆ.

ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ 15,000 ಶಿಕ್ಷಕರ ಹುದ್ದೆಗಳನ್ನು ನೇರ ನೇಮಕಾತಿ ಮಾಡಲು ಅನುಮತಿ ನೀಡಲಾಗಿದೆ. ಈ ಕುರಿತು ಸಕ್ಷಮ ಪ್ರಾಧಿಕಾರಿಗಳು ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಿರುತ್ತಾರೆ.

ಈ ಶೈಕ್ಷಣಿಕ ವರ್ಷದಲ್ಲಿ, ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಅನುಕ್ರಮವಾಗಿ 40,000 ಹಾಗೂ 11,000 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಮಂಜೂರಾತಿ ನೀಡಲಾಗಿದೆ.

**ಸಂಖ್ಯೆ:ಇಪಿ 101 ಪಿಎಂಎ 2026**

(ಎಸ್. ಮಧು ಬಂಗಾರಪ್ಪ)

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು